**MARCH 15. 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು:**

- **ಜೈವಿಕ ತಂತ್ರಜ್ಞಾನ ಬಳಕೆಯೊಂದಿಗೆ ಕೃಷಿ ಕ್ಷೇತ್ರದ ಅಭಿವೃದ್ಧಿಗೆ ಸಚಿವ ಸಂಪುಟ ತೀರ್ಮಾನ – ಸಚಿವ ಕೃಷ್ಣ ಬೈರೇಗೌಡ.**

- **ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಸರ್ಕಾರ ಬದ್ಧ – ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್.**

- **ರಾಜ್ಯದಲ್ಲಿ ಶೀಘ್ರದಲ್ಲೇ ಶುದ್ಧ ಇಂಧನ ನೀತಿ ಜಾರಿಗೆ – ಸಚಿವ ಎಂ.ಬಿ.ಪಾಟೀಲ್.**

- **ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ನೇತೃತ್ವದ ಸಮಿತಿಯಿಂದ 'ಒಂದು ರಾಷ್ಟ್ರ, ಒಂದು ಚುನಾವಣೆ' ಶಿಫಾರಸಿನ ವರದಿ ಸಲ್ಲಿಕೆ.**

<><><>

**ಕೃಷಿ ಕ್ಷೇತ್ರದ ಅಭಿವೃದ್ಧಿಗಾಗಿ ಜೈವಿಕ ತಂತ್ರಜ್ಞಾನ ಬಳಕೆಯೊಂದಿಗೆ ನವೋದ್ಯಮಗಳ ಸ್ಥಾಪನೆಗೆ ಉತ್ತೇಜನ ನೀಡಲು ರಾಜ್ಯ ಸಚಿವ ಸಂಪುಟ ತೀರ್ಮಾನಿಸಿದೆ ಎಂದು ಕೃಷಿ ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ. ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಸಚಿವ ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೈವಿಕ ತಂತ್ರಜ್ಞಾನ ಬಳಕೆ ಹಾಗೂ ಅನ್ವೇಷಣೆಯಿಂದ ಕೃಷಿ ಉತ್ಪಾದನೆ ಹೆಚ್ಚಳವಾಗಬೇಕು. ಆ ಮೂಲಕ ರೈತರ ಲಾಭಾಂಶ ಹೆಚ್ಚಾಗಬೇಕು ಹಾಗೂ ಬೆಳೆಗಳ ಸಂರಕ್ಷಣೆಗೆ ಪೂರಕವಾಗಿ ನವೋದ್ಯಮಗಳು ಸ್ಥಾಪನೆಯಾಗಬೇಕು. ಇದೇ ಉದ್ದೇಶಕ್ಕಾಗಿ ಬೆಂಗಳೂರಿನಲ್ಲಿ ಕೃಷಿ ಅನ್ವೇಷಣಾ ಕೇಂದ್ರವನ್ನು ಸುಮಾರು 67 ಕೋಟಿ ರೂಪಾಯಿ ವೆಚ್ಚದಲ್ಲಿ ಸ್ಥಾಪಿಸಲು ಜೈವಿಕ ತಂತ್ರಜ್ಞಾನ ಇಲಾಖೆಗೆ ಸೂಚಿಸಲು ತೀರ್ಮಾನಿಸಲಾಗಿದೆ ಎಂದು ಹೇಳಿದರು. ಪಿಎಸ್ಐ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರ ಕುರಿತು ನಿವೃತ್ತ ನ್ಯಾಯಮೂರ್ತಿ ಬಿ.ವೀರಪ್ಪ ಅವರ ವರದಿ ಆಧರಿಸಿ ಹೆಚ್ಚಿನ ತನಿಖೆ ಮಾಡಲು ವಿಶೇಷ ತನಿಖಾ ತಂಡ ರಚನೆಗೆ ಸಂಪುಟ ಒಪ್ಪಿಗೆ ಸೂಚಿಸಿದೆ ಎಂದರು. ಕರ್ನಾಟಕದ ಭಾಷೆ, ಸಂಸ್ಕೃತಿ, ಪರಂಪರೆ, ಇತಿಹಾಸದ ಪ್ರತೀಕವಾದ ಶ್ರೀ ಭುವನೇಶ್ವರಿ**

ಪ್ರತಿಮೆ ಸ್ಥಾಪನೆಗೆ ಸಂಪುಟ ಅನುಮೋದನೆ ನೀಡಿದ್ದು, ಶೀಘ್ರವೇ ಕಾಮಗಾರಿ ಆರಂಭಿಸಲು ತೀರ್ಮಾನಿಸಲಾಗಿದೆ. ವಿಧಾನಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಸಮೀಪ 23 ಕೋಟಿ ರೂಪಾಯಿ ವೆಚ್ಚದಲ್ಲಿ ಭುವನೇಶ್ವರಿ ಪ್ರತಿಮೆ ಸ್ಥಾಪಿಸಲು ಉದ್ದೇಶಿಸಲಾಗಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ 33 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ತೆರೆಯಲು ಸಂಪುಟ ತೀರ್ಮಾನಿಸಿದೆ ಎಂದು ಸಚಿವರು ತಿಳಿಸಿದರು.

<><><>

371ನೇ ಜೆ ಕಲಂ ಜಾರಿಗೆ ತಂದಿರುವುದರಿಂದ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಸಹಕಾರಿಯಾಗಿದೆ. ಈ ಭಾಗದ ಜನರ ಬದುಕಿಗೆ ಶಾಶ್ವತ ಪರಿಹಾರ ದೊರೆತಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ರಾಯಚೂರಿನಲ್ಲಿ ಆಯೋಜಿಸಲಾಗಿದ್ದ ಪಂಚ ಖಾತರಿ ಯೋಜನೆಗಳ ಸಮಾವೇಶಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಲೇಖನಿ ಮತ್ತು ಅಧಿಕಾರ ಇರುವುದು ಜನಸೇವೆಗಾಗಿ. ಈ ಹಿನ್ನೆಲೆಯಲ್ಲಿ ಜನರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಬದ್ಧವಾಗಿದೆ. ಯಾವುದೇ ಅಭಿವೃದ್ಧಿ ಕಾರ್ಯಗಳಿಗೆ ತಡೆಯಾಗದಂತೆ ಸೂಕ್ತ ಅನುದಾನ ನೀಡಲಾಗುತ್ತಿದೆ ಎಂದು ತಿಳಿಸಿದರು.

<><><>

ರಾಜಧಾನಿ ಬೆಂಗಳೂರು ಮಹಾನಗರದಲ್ಲಿ ತೀವ್ರ ಮಳೆ ಅಭಾವದಿಂದ ನೀರಿನ ಸಮಸ್ಯೆ ಎದುರಾಗಿದೆ. ನಗರ ವ್ಯಾಪ್ತಿಯಲ್ಲಿ 6 ಸಾವಿರದ 900 ಕೊಳವೆ ಬಾವಿಗಳಲ್ಲಿ ನೀರು ಬತ್ತಿಹೋಗಿದ್ದು, ಇನ್ನು 7 ಸಾವಿರ ಬೋರ್‌ವೆಲ್‌ಗಳು ಮಾತ್ರ ಜೀವಂತವಾಗಿವೆ. ಹೊಸ ಬೋರ್‌ವೆಲ್‌ಗಳನ್ನು ಕೊರೆಯಲು ನಿಯಂತ್ರಣದೊಂದಿಗೆ ಅನುಮತಿ ನೀಡಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ನೀರು ಬಳಕೆ ಮತ್ತು ಸಂರಕ್ಷಣೆ ಕುರಿತ 4 ಆಪ್‌ಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಬೋರ್‌ವೆಲ್ ಕೊರೆಯುವ ಮುನ್ನ ಸರ್ಕಾರದ ಅನುಮತಿ ಪಡೆಯಬೇಕು. ಇದಕ್ಕಾಗಿ, ಅಲ್ಲದೇ, ನೀರು ಸೋರಿಕೆ ಪ್ರಕರಣಗಳ ತುರ್ತು ನಿರ್ವಹಣೆಗೆ, ಗಿಡ–ಮರಗಳಿಗೆ ಹಾಗೂ ಕೈಗಾರಿಕೆಗಳಲ್ಲಿ ಸಂಸ್ಕರಿಸಿದ ನೀರಿನ ಮರುಬಳಕೆ ಕುರಿತ ಈ ಆಪ್‌ಗಳ ಬಳಕೆ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲಾಗುವುದು ಎಂದರು. ಸಮರೋಪಾದಿಯಲ್ಲಿ ಜಲರಕ್ಷಣೆಗೆ ಸಹಕರಿಸಬೇಕು. ಬೆಂಗಳೂರು ಸುತ್ತಮುತ್ತ  ಅಂತರ್ಜಲಮಟ್ಟ ಉತ್ತಮವಾಗಿರುವ ಸ್ಥಳಗಳಿಂದ ಬೆಂಗಳೂರಿಗೆ ನೀರು ಒದಗಿಸುವ ಚಿಂತನೆಯಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

<><><>

ಬೇರೆ ರಾಜ್ಯಕ್ಕೆ ಹೋಲಿಸಿದರೆ ಕಾನೂನು ವ್ಯವಸ್ಥೆಯಲ್ಲಿ ನಮ್ಮ ರಾಜ್ಯ ಮುಂದಿದೆ. ದೇಶದಲ್ಲಿ 3 ಕೋಟಿ ವ್ಯಾಜ್ಯಗಳು ಬಾಕಿಯಿವೆ. ಇಂದು ಮನೆ ಮನೆಗೆ ಸಂವಿಧಾನವನ್ನು ತಲುಪಿಸುವ ಕಾರ್ಯಗಳು ನಡೆಯುತ್ತಿವೆ. ಬದುಕಿನಲ್ಲಿ ಕಾನೂನು ಪ್ರಮುಖ ಪಾತ್ರ ವಹಿಸುವುದರಿಂದ ಎಲ್ಲರೂ ಅರಿತುಕೊಳ್ಳುವುದು ಅವಶ್ಯ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್. ಕೆ. ಪಾಟೀಲ್ ಹೇಳಿದ್ದಾರೆ. ಹುಬ್ಬಳ್ಳಿಯ ನವನಗರದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದಲ್ಲಿ ಕಟ್ಟಡದ ಶಂಕು ಸ್ಥಾಪನೆ ಹಾಗೂ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು. ನಮ್ಮ ಸಂವಿಧಾನ ಬಹಳ ಶಕ್ತಿಯುತವಾಗಿದೆ. ಜನರನ್ನು ಜಾಗೃತಗೊಳಿಸುವ ಶಕ್ತಿ ಸಂವಿಧಾನಕ್ಕಿದೆ. ವಿದ್ಯಾರ್ಥಿಗಳು ಸಂವಿಧಾನ, ಕಾನೂನು ಓದುವ ಮೂಲಕ ಸಮಾಜಕ್ಕೆ ಸೇವೆ ಸಲ್ಲಿಸಲಿ. ರಾಷ್ಟ್ರೀಯ ಕಾನೂನು ಶಾಲೆಯನ್ನು ಮೀರಿಸುವ ವಿಶ್ವವಿದ್ಯಾಲಯವಾಗಿ ಬೆಳೆಯಬೇಕು ಎಂದು ಶುಭ ಹಾರೈಸಿದರು.

<><><>

ನಾಗರಿಕರು ಜಾತ್ರೆ, ಪ್ರವಾಸ ಹಾಗೂ ಇನ್ನಿತರ ಕಾರ್ಯಗಳಿಗೆ ಬೇರೆ ಊರಿಗೆ ತೆರಳುವ ಸಂದರ್ಭದಲ್ಲಿ ಸಾರ್ವಜನಿಕರ ಮನೆ ರಕ್ಷಣೆ ಮಾಡುವ ಯೋಜನೆಯನ್ನು ಗದಗದಲ್ಲಿ ಜಾರಿಗೆ ತರಲಾಗಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ತಿಳಿಸಿದ್ದಾರೆ. ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಬೀಗ ಹಾಕಿದ ಮನೆಗಳ ನಿಗಾ ವಹಿಸುವ ಕಣ್ಗಾವಲು

ವ್ಯವಸ್ಥೆಯ ಉದ್ಘಾಟನೆ ಹಾಗೂ ಪೊಲೀಸ್ ಜಾಗೃತಿ ವಾಹನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಸಾರ್ವಜನಿಕರು ಪೊಲೀಸ್ ಇಲಾಖೆಯ ಸಹಾಯವಾಣಿ ಸಂಖ್ಯೆಗೆ ವಾಟ್ಸಾಪ್ ಮೆಸೇಜ್ ಮಾಡುವ ಮೂಲಕ ತಮ್ಮ ಮನೆಯ ಹೆಸರನ್ನು ನೊಂದಾಯಿಸಿ, ನಿಶ್ಚಿಂತೆಯಿಂದ ಊರಿಗೆ ತೆರಳಬಹುದು ಎಂದು ಅವರು ಹೇಳಿದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ರಾಜ್ಯದಲ್ಲಿ ಶೀಘ್ರದಲ್ಲೇ ಶುದ್ಧ ಇಂಧನ ನೀತಿಯನ್ನು ಜಾರಿಗೆ ತರಲಾಗುವುದು. ನೀತಿಯ ಕರಡು ಸಿದ್ಧವಾಗಿದ್ದು, ಮಾಲಿನ್ಯ ಉಂಟು ಮಾಡದಂತಹ ಸುಗಮ ವಾಹನ ಸಂಚಾರ ವ್ಯವಸ್ಥೆಗೆ ಉತ್ತೇಜನ ನೀಡಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಖಾತೆ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಪರಿಸರ ಸ್ನೇಹಿ ಮತ್ತು ಸುಸ್ಥಿರ ಸಂಚಾರ ವ್ಯವಸ್ಥೆಯ ಮಾದರಿಗಳನ್ನು ಉತ್ತೇಜಿಸುವ ರಾಷ್ಟ್ರ ಮಟ್ಟದ ಸ್ಪರ್ಧೆಯಲ್ಲಿ ವಿಜೇತರಾದ ಕಂಪನಿಗಳಿಗೆ ಬಹುಮಾನಗಳನ್ನು ವಿತರಿಸಿ ಅವರು ಮಾತನಾಡಿದರು. ಹಳೆಯ ವಾಹನಗಳನ್ನು ಹೈಡ್ರೋಜನ್ ಮತ್ತು ಡೀಸೆಲ್ ಎರಡರ ಬಲದ ಮೇಲೆ ಓಡಿಸುವುದನ್ನು ಸಾಧ್ಯವಾಗಿಸುವ ನಿಟ್ಟಿನಲ್ಲಿ ರೆಟ್ರೊ ಫಿಟ್‌ಮೆಂಟ್ ಕಿಟ್ ತಯಾರಿಸುತ್ತಿರುವ ಖಾಸಗಿ ಕಂಪನಿಯ ಸಾಧನೆ ಅನುಕರಣೀಯ ಎಂದರು.

<><><>

ಸರ್ಕಾರವು ವಿವಿಧ ವಸತಿ ಯೋಜನೆಗಳಡಿ ನಿರ್ಮಿಸಿರುವ ಮನೆಗಳಲ್ಲಿ ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾದವರು ವಾಸಿಸುತ್ತಿದ್ದಲ್ಲಿ ಅಂತಹವರನ್ನು ಮನೆಯಿಂದ ಖಾಲಿ ಮಾಡಿಸಲು ಕ್ರಮಕೈಗೊಳ್ಳಲಾಗುವುದೆಂದು ಗೃಹ ಖಾತೆ ಸಚಿವ ಸಚಿವ ಡಾ: ಜಿ. ಪರಮೇಶ್ವರ ತಿಳಿಸಿದ್ದಾರೆ. ತುಮಕೂರಿನಲ್ಲಿ ನಿನ್ನೆ ಆಯೋಜಿಸಿದ್ದ ಫಲಾನುಭವಿಗಳಿಗೆ ವಿವಿಧ ಸವಲತ್ತುಗಳ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು; ಸರ್ಕಾರ ನೀಡಿರುವ ಮನೆಗಳಲ್ಲಿ ಕಳ್ಳರು, ಮಾದಕ ವಸ್ತು ಮಾರಾಟ ಮಾಡುವವರು ಸೇರಿದಂತೆ ವಿವಿಧ ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾದವರು ವಾಸಿಸುತ್ತಿರುವ ಬಗ್ಗೆ ದೂರುಗಳು ಕೇಳಿ ಬರುತ್ತಿವೆ. ಇಂಥ ವ್ಯಕ್ತಿಗಳು ವಾಸಿಸುತ್ತಿರುವುದು ಕಂಡು ಬಂದರೆ ಅಕ್ಕ–ಪಕ್ಕದವರು ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

<><><>

ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ನೇತೃತ್ವದ 'ಒಂದು ರಾಷ್ಟ್ರ, ಒಂದು ಚುನಾವಣೆ' ಸಮಿತಿಯು ರಾಷ್ಟ್ರಪತಿ ಭವನದಲ್ಲಿ ನಿನ್ನೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ತನ್ನ ವರದಿ ಸಲ್ಲಿಸಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ, ಕಾನೂನು ಮತ್ತು ನ್ಯಾಯಾಂಗ ಖಾತೆ ರಾಜ್ಯ ಸಚಿವ ಅರ್ಜುನ್ ರಾಮ್ ಮೇಘ್ವಾಲ್, ಜಮ್ಮು–ಕಾಶ್ಮೀರ ಮಾಜಿ ಮುಖ್ಯಮಂತ್ರಿ ಗುಲಾಮ್ ನಬಿ ಆಜಾದ್ ಸೇರಿದಂತೆ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು. ಲೋಕಸಭೆ, ವಿಧಾನಸಭೆ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಏಕಕಾಲದಲ್ಲಿ ಚುನಾವಣೆ ನಡೆಸುವ ಕುರಿತು ಸಮಿತಿಯು ತನ್ನ ವರದಿಯಲ್ಲಿ ಶಿಫಾರಸು ಸಲ್ಲಿಸಿದೆ.

<><><>

ರಾಜ್ಯಸಭೆಗೆ ಇತ್ತೀಚೆಗೆ ನಾಮಕರಣಗೊಂಡ ಖ್ಯಾತ ಸಮಾಜ ಸೇವಕಿ ಡಾಕ್ಟರ್ ಸುಧಾ ಮೂರ್ತಿ ಅವರು ನಿನ್ನೆ ಪ್ರಮಾಣವಚನ ಸ್ವೀಕರಿಸಿದರು. ಸಂಸತ್ ಭವನದಲ್ಲಿ ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಪ್ರತಿಜ್ಞಾ ವಿಧಿ ಬೋಧಿಸಿದರು. ಸುಧಾ ಮೂರ್ತಿ ಅವರು ಕನ್ನಡದಲ್ಲಿ ಪ್ರಮಾಣವಚನ ಸ್ವೀಕರಿಸಿದ್ದು ವಿಶೇಷವಾಗಿದೆ.

<><><>

ಧಾರವಾಡ ಲೋಕಸಭಾ ಕ್ಷೇತ್ರದಿಂದ ಐದನೇ ಬಾರಿಗೆ ಬಿಜೆಪಿ ಅಭ್ಯರ್ಥಿಯಾಗಿ ಘೋಷಣೆಯಾಗಿರುವ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಹುಬ್ಬಳ್ಳಿಯಲ್ಲಿ ನಿನ್ನೆ ತಮ್ಮ ಚುನಾವಣಾ ಪ್ರಚಾರವನ್ನು ವಿಧ್ಯುಕ್ತವಾಗಿ ಪ್ರಾರಂಭಿಸಿದ್ದಾರೆ. ಐದನೇ ಬಾರಿಗೆ ತಮ್ಮನ್ನು ಅಭ್ಯರ್ಥಿಯನ್ನಾಗಿ ಪ್ರಧಾನಿ ನರೇಂದ್ರ ಮೋದಿ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಸೇರಿದಂತೆ ಕೇಂದ್ರದ ನಾಯಕರು ಘೋಷಿಸಿದ್ದಾರೆ. ಸ್ಥಳೀಯ ನಾಯಕರ ಸಹಕಾರವೂ ಪೂರಕವಾಗಿ ಕೆಲಸ ಮಾಡಿದೆ. ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಕೆಲಸಗಳನ್ನು ಮಾಡಿದ್ದು, ಜನರ ಆಶೀರ್ವಾದದಿಂದ ಮತ್ತೊಮ್ಮೆ ಜಯ ಗಳಿಸುವ ವಿಶ್ವಾಸವಿದೆ. ಆ ಮೂಲಕ ನರೇಂದ್ರ ಮೋದಿ ಅವರನ್ನು ಮೂರನೇ ಬಾರಿಗೆ ಪ್ರಧಾನಿಯನ್ನಾಗಿಸುವ ಗುರಿ ಹೊಂದಿದ್ದೇವೆ ಎಂದರು.

<><><>

ರಾಜ್ಯದ ಅಭಿವೃದ್ಧಿ ಹಾಗೂ ಪಕ್ಷದ ಹಿತದೃಷ್ಟಿಯಿಂದ ಲೋಕಸಭಾ ಚುನಾವಣೆಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ಇದು ಒಬ್ಬ ವ್ಯಕ್ತಿಯ ತೀರ್ಮಾನವಲ್ಲ. ಪಕ್ಷದ ವರಿಷ್ಠರು, ವೀಕ್ಷಕರು ಹಾಗೂ ಸ್ಥಳೀಯ ನಾಯಕರೊಂದಿಗೆ ಸಮಾಲೋಚಿಸಿದ ನಂತರ ಎಲ್ಲ ಆಯಾಮಗಳನ್ನು ಪರಿಶೀಲಿಸಿ ತೀರ್ಮಾನಿಸಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಬೆಂಗಳೂರಿನ ಪಕ್ಷದ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಹಾಗೂ ಜೆಡಿಎಸ್ ಒಂದಾಗಿ ರಾಜ್ಯದ ಎಲ್ಲ 28 ಲೋಕಸಭಾ ಕ್ಷೇತ್ರಗಳಲ್ಲಿ ಗೆಲುವು ಸಾಧಿಸುವ ಮೂಲಕ ಹೊಸ ದಾಖಲೆ ಬರೆಯಬೇಕು ಎಂಬ ಗುರಿ ಹೊಂದಿದ್ದೇವೆ. ಆ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರ ಕೈ ಬಲಪಡಿಸುವ ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದರು. ಈ ಮಧ್ಯೆ: ಮೈಸೂರು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿರುವ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ನಿನ್ನೆ ಬೆಂಗಳೂರಿನ ಭಾರತೀಯ ಜನತಾ ಪಕ್ಷದ ಕಚೇರಿಯಲ್ಲಿ ಪಕ್ಷಕ್ಕೆ ಸೇರ್ಪಡೆಯಾದರು. ಪಕ್ಷವು ತಮ್ಮ ಮೇಲೆ ಭರವಸೆಯಿಟ್ಟು, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರಕ್ಕೆ ಅಭ್ಯರ್ಥಿಯಾಗಿ ಆಯ್ಕೆ ಮಾಡಿದೆ. ಸಾರ್ವಜನಿಕ ಜೀವನದಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದಾಗಿ ತಿಳಿಸಿದರು.

<><><>

ಅಸಭ್ಯ ಮತ್ತು ಲೈಂಗಿಕ ದೃಶ್ಯಗಳನ್ನು ಒಳಗೊಂಡ ವಿವಿಧ ಓಟಿಟಿ ಮತ್ತು ಜಾಲತಾಣಗಳನ್ನು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವಾಲಯ ಸ್ಥಗಿತಗೊಳಿಸಿದೆ. ಒಟ್ಟು 18 ಓಟಿಟಿ ಪ್ಲಾಟ್‌ಫಾರ್ಮ್‌ಗಳು, 19 ಜಾಲತಾಣ, 57 ಸಾಮಾಜಿಕ ಮಾಧ್ಯಮ ಖಾತೆಗಳು ಹಾಗೂ 10 ಮೊಬೈಲ್ ಆ್ಯಪ್‌ಗಳನ್ನು ರದ್ದುಪಡಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಸೃಜನಶೀಲ, ಅಭಿವ್ಯಕ್ತಿಯ ಹೆಸರಿನಲ್ಲಿ ಅಸಭ್ಯ ಮತ್ತು ಅಸಹನೀಯ ಕಂಟೆಂಟ್‌ಗಳನ್ನು ಪ್ರಕಟಿಸುವುದು ಸರಿಯಲ್ಲ. ಓಟಿಟಿ ಮತ್ತು ಸಾಮಾಜಿಕ ಜಾಲತಾಣಗಳು ತಮ್ಮ ಜವಾಬ್ದಾರಿ ಅರಿಯಬೇಕು ಎಂದು ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅನುರಾಗ್ ಸಿಂಗ್ ಠಾಕೂರ್ ಹೇಳಿದ್ದಾರೆ.

<><><>        <><><>